## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರ ಪ್ರಕರಣ 121 ರನ್ವಯ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಸಹಕಾರ ಸಂಘಗಳು ವಾರ್ಷಿಕ ಲೆಕ್ಕಪರಿಶೋಧನಾ ವರದಿಗಳನ್ನು ಸಲ್ಲಿಸುವ ಕಾಲಾವಧಿಯನ್ನು ದಿನಾಂಕ:31.10.2019 ರವರೆಗೆ ವಿಸ್ತರಿಸುವ ಬಗ್ಗೆ.

**ಓದಲಾಗಿದೆ:**
1. ಅಧ್ಯಕ್ಷರು, ಕರ್ನಾಟಕ ರಾಜ್ಯ ಸನ್ನದು ಲೆಕ್ಕಪರಿಶೋಧಕರ ಅಸೋಸಿಯೇಷನ್ ನಿ., ಬೆಂಗಳೂರು ಇವರ ಪತ್ರ ದಿನಾಂಕ:07.08.2019.
2. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು (ಅ.ಪ್ರ) ಇವರ ಪತ್ರ ಸಂಖ್ಯೆ:ಲೆಪಶಾ/ಬೆವಿ/ಲೆಪಅವಧಿವಿಸ್ತರಣೆ/74/2019-20, ದಿ:29.08.2019.

**ಪ್ರಸ್ತಾವನೆ :**

ಮೇಲೆ ಓದಲಾದ (1) ಮತ್ತು (2) ರ ಪತ್ರಗಳಲ್ಲಿ, ಕರ್ನಾಟಕ ಉತ್ತರ ಭಾಗ, ಮಲೆನಾಡು ಪ್ರದೇಶ ಹಾಗೂ ಕರಾವಳಿ ಪ್ರದೇಶದ ಬಹುತೇಕ ಜಿಲ್ಲೆಗಳಲ್ಲಿ ಹೆಚ್ಚಿನ ಮಳೆ ಹಾಗೂ ನೆರೆ ಹಾವಳಿಯಿಂದಾಗಿ ಅನೇಕ ಗ್ರಾಮೀಣ ಪ್ರದೇಶಗಳು ಮುಳುಗಡೆಯಾಗಿರುವುದರಿಂದ ಆ ಪ್ರದೇಶಗಳಲ್ಲಿನ ಹೆಚ್ಚಿನ ಸಹಕಾರ ಸಂಘಗಳು ಗ್ರಾಮೀಣ ಪ್ರದೇಶದಲ್ಲಿರುವುದರಿಂದ ಸಹಕಾರ ಸಂಘಗಳ ಲೆಕ್ಕಪರಿಶೋಧನೆ ನಿರ್ವಹಿಸಲು, ಸಹಕಾರ ಸಂಘಗಳಿಗೆ ಭೇಟಿ ನೀಡಿ, ಲೆಕ್ಕಪರಿಶೋಧನಾ ಕಾರ್ಯ ಕೈಗೊಳ್ಳಲು ಕಷ್ಟಸಾಧ್ಯವಾಗಿರುತ್ತದೆ. ಸದರಿ ಪ್ರದೇಶಗಳಲ್ಲಿನ ಸಹಕಾರ ಸಂಘಗಳ ಲೆಕ್ಕಪರಿಶೋಧನೆಯನ್ನು ಕೈಗೊಳ್ಳಲು ಎಲ್ಲಾ ನೆರೆಪೀಡಿತ ಪ್ರದೇಶಗಳು ಸಾಮಾನ್ಯ ಸ್ಥಿತಿ ತಲುಪುವವರೆಗೂ ಲೆಕ್ಕಪರಿಶೋಧನೆ ನಿರ್ವಹಿಸಲು ಸಾಧ್ಯವಾಗುವುದಿಲ್ಲ. ಈ ಕುರಿತು, ಅಧ್ಯಕ್ಷರು, ಕರ್ನಾಟಕ ರಾಜ್ಯ ಸನ್ನದು ಲೆಕ್ಕಪರಿಶೋಧಕರ ಅಸೋಸಿಯೇಷನ್ ನಿ., ರವರು ದಿನಾಂಕ:07-08-2019 ರಂದು ಪತ್ರ ಸಲ್ಲಿಸಿ, ಲೆಕ್ಕಪರಿಶೋಧನೆ ನಿರ್ವಹಿಸಿ, ವರದಿ ಸಲ್ಲಿಸುವ ಅವಧಿಯನ್ನು ದಿನಾಂಕ:31-08-2019 ರ ಬದಲಾಗಿ ದಿನಾಂಕ:31-10-2019 ಕ್ಕೆ ವಿಸ್ತರಿಸಲು ಕೋರಿರುತ್ತಾರೆ ಎಂದು ತಿಳಿಸಿ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು (ಅ.ಪ್ರ) ಬೆಂಗಳೂರು ಇವರು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಒ 56 ಪಿಎಂಸಿ 2019, ಬೆಂಗಳೂರು, ದಿನಾಂಕ:04-09-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರ ಕಲಂ 121 ರಡಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರದನ್ವಯ, ರಾಜ್ಯದ ಪ್ರವಾಹ ಪೀಡಿತ ಉತ್ತರ ಕರ್ನಾಟಕ ಭಾಗ, ಮಲೆನಾಡು ಪ್ರದೇಶ ಹಾಗೂ ಕರಾವಳಿ ಪ್ರದೇಶದ ಜಿಲ್ಲೆಗಳಲ್ಲಿನ ಲೆಕ್ಕಪರಿಶೋಧನಾ ವರದಿಯನ್ನು ಸಹಕಾರ ಸಂಘಗಳ ನಿಯಮಗಳು 1960 ರ ನಿಯಮ 29ಬಿ(7) ರನ್ವಯ ಪ್ರತಿ ವರ್ಷ **"ಸೆಪ್ಟೆಂಬರ್ ತಿಂಗಳ 1 ನೇ ದಿನಾಂಕದೊಳಗೆ ಸಂಬಂಧಿಸಿದ ಪ್ರಾಧಿಕಾರಿಗಳಿಗೆ ಲೆಕ್ಕಪರಿಶೋಧನಾ ವರದಿಯನ್ನು ನೀಡಬೇಕಿರುತ್ತದೆ"**

→

**ಎಂಬುದರ ಬದಲಾಗಿ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ, ದಿನಾಂಕ:31-10-2019 ರ ದಿನಾಂಕದೊಳಗಾಗಿ ಸಂಬಂಧಿಸಿದ ಪ್ರಾಧಿಕಾರಗಳಿಗೆ ಲೆಕ್ಕಪರಿಶೋಧನಾ ವರದಿಗಳನ್ನು ನೀಡಬೇಕಾಗಿರುತ್ತದೆಯೆಂದು"** ಆದೇಶಿಸಿದೆ.

ಕಂದಾಯ ಇಲಾಖೆಯ ಆದೇಶ ಸಂಖ್ಯೆ. ಆರ್ ಡಿ 87 ಟಿಎನ್ಆರ್ 2019 ದಿನಾಂಕ:10-08-2019 ಹಾಗೂ ದಿನಾಂಕ:16-08-2019 ರ ಆದೇಶಗಳಲ್ಲಿ ರಾಜ್ಯದಲ್ಲಿ 2019 ನೇ ಸಾಲಿನಲ್ಲಿ ಅತಿವೃಷ್ಟಿ/ಪ್ರವಾಹ ಎದುರಿಸಿರುವ ತಾಲ್ಲೂಕುಗಳನ್ನು/ಜಿಲ್ಲೆಗಳನ್ನು ಪ್ರವಾಹ ಪೀಡಿತ ಪ್ರದೇಶಗಳೆಂದು ಘೋಷಿಸಿದ್ದು, ಸದರಿ ತಾಲ್ಲೂಕು/ಜಿಲ್ಲೆಗಳಿಗೆ ಮಾತ್ರ ಈ ಆದೇಶವು ಅನ್ವಯಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಬಿ.ಎಸ್.ಹರೀಶ್)**
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

**ಇವರಿಗೆ :**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು :**

1. ಮಹಾಲೇಖಪಾಲರು, (ಜಿ&ಎಸ್ಎಸ್ಎ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
2. ಮಹಾಲೇಖಪಾಲರು, (ಇ&ಆರ್ಎಸ್ಎ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
3. ಮಹಾಲೇಖಪಾಲರು, (ಎ&ಇ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
5. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.
6. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, (ಅ.ಪ್ರ) ನಂ.17, ಜಯನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು-04.
7. ಸಹಕಾರ ಸಂಘಗಳ ಜಂಟಿ ನಿಬಂಧಕರು/ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿಬಂಧಕರುಗಳಿಗೆ.
8. ರಾಜ್ಯ ಎಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರುಗಳಿಗೆ.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಸನ್ನದು ಸನ್ನದು ಲೆಕ್ಕಪರಿಶೋಧಕರ ಅಸೋಸಿಯೇಷನ್ ನಿ., ನಂ.67, 1ನೇ ಮಹಡಿ, ವೆಸ್ಟ್ ಆಫ್ ಕಾರ್ಡ ರೋಡ್, ಮಹಾಲಕ್ಷ್ಮೀಪುರಂ 2ನೇ ಹಂತ, ರಾಜಾಜಿನಗರ ನಗರ ಮೆಟ್ರೋ ಸ್ಟೇಷನ್ ಹಿಂದುಗಡೆ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-2), ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ.
12. ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ ಇವರ ಆಪ್ತ ಸಹಾಯಕರು, ಸಹಕಾರ ಇಲಾಖೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ-3,(ಪ್ರ), ಇವರ ಆಪ್ತ ಸಹಾಯಕರು, ಸಹಕಾರ ಇಲಾಖೆ, ಬೆಂಗಳೂರು.
14. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿ.

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ರಾಜ್ಯದ 17 ಜಿಲ್ಲೆಗಳ 80 ತಾಲ್ಲೂಕುಗಳನ್ನು ಪ್ರವಾಹ ಪೀಡಿತ ಪ್ರದೇಶಗಳೆಂದು ಘೋಷಿಸುವ ಬಗ್ಗೆ.

*****

ಪ್ರಸ್ತಾವನೆ:

2019ರ ಮುಂಗಾರು ಋತುವಿನಲ್ಲಿ ಆಗಸ್ಟ್ 1 ರಿಂದ 9ರವರೆಗೆ ಕರ್ನಾಟಕ ರಾಜ್ಯದಲ್ಲಿ ಬಿದ್ದಂತಹ ಮಹಾ ಮಳೆಗೆ ಹಾಗೂ ಮಹಾರಾಷ್ಟ್ರ ರಾಜ್ಯದಲ್ಲಿನ ಕೃಷ್ಣಾ ಕಣಿವೆ ಜಲಾಶಯಗಳು ತುಂಬಿ ಹರಿದ ನೀರಿನಿಂದ ರಾಜ್ಯದ ಉತ್ತರ ಕರ್ನಾಟಕದ ಹಲವು ಭಾಗಗಳಲ್ಲಿ ಪ್ರವಾಹ ಉಂಟಾಗಿ ನದಿಯ ಅಕ್ಕಪಕ್ಕದ ಪ್ರದೇಶಗಳಿಗೆ ನೀರು ನುಗ್ಗಿ ಅಪಾರ ಪ್ರಮಾಣದ ಜೀವ ಹಾನಿ ಮತ್ತು ಬೆಳೆ ಹಾನಿ ಹಾಗೂ ಸಾರ್ವಜನಿಕ ಆಸ್ತಿ ಹಾನಿಯಾಗಿರುತ್ತದೆ. ಇದೇ ಅವಧಿಯಲ್ಲಿ ರಾಜ್ಯದ ಕರಾವಳಿ ಮತ್ತು ಮಲೆನಾಡಿನ ಜಿಲ್ಲೆಗಳಲ್ಲಿಯೂ ಸಹ ಭಾರಿ ಮಳೆಯಿಂದ, ಪ್ರವಾಹ ಪರಿಸ್ಥಿತಿ ಉಂಟಾಗಿರುವುದರಿಂದ ಈ ಪ್ರದೇಶಗಳಲ್ಲಿಯೂ ಸಹ ಅಪಾರ ಪ್ರಮಾಣದ ಆಸ್ತಿ ಹಾನಿಯಾಗಿರುತ್ತದೆ.

ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 9-8-2019ರಂದು ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ, ಭಾರಿ ಮಳೆ ಮತ್ತು ಪ್ರವಾಹ ಒಳಗಾದ ಪ್ರದೇಶಗಳನ್ನು ಗುರುತಿಸಿ, ರಾಜ್ಯದ 17 ಜಿಲ್ಲೆಗಳಲ್ಲಿ ಬರುವ 80 ತಾಲ್ಲೂಕುಗಳನ್ನು ಪ್ರವಾಹ ಪೀಡಿತ ತಾಲ್ಲೂಕುಗಳೆಂದು ಘೋಷಿಸಲು ಶಿಫಾರಸ್ಸು ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 87 ಟಿಎನ್‌ಆರ್ 2019 ಬೆಂಗಳೂರು, ದಿನಾಂಕ:10.08.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019ನೇ ಸಾಲಿನ ಮುಂಗಾರು ಋತುವಿನಲ್ಲಿ ಆಗಸ್ಟ್ 1 ರಿಂದ 9ರವರೆಗೆ ಅತಿವೃಷ್ಟಿಯಿಂದ ಉಂಟಾದ ಪ್ರವಾಹದಿಂದಾಗಿ ಅಪಾರ ಪ್ರಮಾಣದಲ್ಲಿ ಬೆಳೆ ಹಾನಿ, ಜೀವ ಹಾನಿ ಹಾಗೂ ಮೂಲಭೂತ ಸೌಕರ್ಯಗಳ ಹಾನಿಯಾಗಿರುವ ಹಿನ್ನೆಲೆಯಲ್ಲಿ ಅನುಬಂಧದಲ್ಲಿ ನಮೂದಿಸಿರುವ ರಾಜ್ಯದ 17 ಜಿಲ್ಲೆಗಳ 80 ತಾಲ್ಲೂಕುಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಪ್ರವಾಹ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ.

ಪ್ರವಾಹ ಪೀಡಿತ ಪ್ರದೇಶಗಳೆಂದು ಘೋಷಿಸಿರುವ ತಾಲ್ಲೂಕುಗಳಲ್ಲಿ ಎಸ್.ಡಿ.ಆರ್.ಎಫ್/ ಎನ್.ಡಿ.ಆರ್.ಎಫ್ ಮಾರ್ಗಸೂಚಿ ಪ್ರಕಾರ ಜಿಲ್ಲಾಡಳಿತವು ಅಗತ್ಯ ಪರಿಹಾರ ಕಾರ್ಯಕ್ರಮಗಳನ್ನು ಕೈಗೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲಲಿತಾ. ಹೆಚ್ ಹಂದಿಗೋಳ)
ಸರ್ಕಾರದ ಉಪ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ನೋ&ಮು)

10/8/2019

ಇವರಿಗೆ:

ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯಪತ್ರ, ವಿಕಾಸಸೌಧ, ಬೆಂಗಳೂರು – ಈ ಆದೇಶವನ್ನು ಕೂಡಲೇ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿ:

1) ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
3) ಪ್ರಾದೇಶಿಕ ಆಯುಕ್ತರು, ಬೆಂಗಳೂರು / ಮೈಸೂರು/ ಕಲಬುರಗಿ ಮತ್ತು ಬೆಳಗಾವಿ ವಿಭಾಗ,
4) 17 ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5) 17 ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6) ರಾಜ್ಯದ 17 ಜಿಲ್ಲೆಗಳ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು.
7) ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
8) ಆಯುಕ್ತರು, ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು.
9) ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್, ಬೆಂಗಳೂರು.
10) ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ಉಸ್ತುವಾರಿ ಕೇಂದ್ರ, ಅಟ್ಟೂರು ಬಡಾವಣೆ, ಯಲಹಂಕ, ಬೆಂಗಳೂರು.
11) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
12) ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
13) ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
14) 17 ಜಿಲ್ಲೆಗಳ ಜಿಲ್ಲಾ ಖಜಾನಾಧಿಕಾರಿಗಳು.
15) ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
16) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
17) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
18) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರುರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
19) ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರ ಆಪ್ತ ಕಾರ್ಯದರ್ಶಿ.
20) ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಲೆಕ್ಕಪತ್ರ ಶಾಖೆ.
21) ಶಾಖಾ ರಕ್ಷಾ ಕಡತ.

## ಅನುಬಂಧ

**ದಿನಾಂಕ: 01.08.2019ರಿಂದ 09.08.2019ರವರೆಗೆ ರಾಜ್ಯದಲ್ಲಿನ 17 ಜಿಲ್ಲೆಗಳಲ್ಲಿ 80 ತಾಲ್ಲೂಕುಗಳನ್ನು ಪ್ರವಾಹಕ್ಕೆ ತುತ್ತಾಗಿರುವ ಪ್ರದೇಶಗಳ ಪಟ್ಟಿ**

| ಕ್ರ. ಸಂ. | ಜಿಲ್ಲೆ | ಕ್ರ. ಸಂ. | ತಾಲ್ಲೂಕು |
|---|---|---|---|
| 1 | ಬೆಳಗಾವಿ | 1 | ಅಥಣಿ |
| | | 2 | ಬೈಲಹೊಂಗಲ |
| | | 3 | ಬೆಳಗಾವಿ |
| | | 4 | ಚಿಕ್ಕೋಡಿ |
| | | 5 | ಗೋಕಾಕ್ |
| | | 6 | ಹುಕ್ಕೇರಿ |
| | | 7 | ಖಾನ್‌ಪುರ |
| | | 8 | ರಾಮದುರ್ಗ |
| | | 9 | ರಾಯಬಾಗ |
| | | 10 | ಸವದತ್ತಿ |
| 2 | ಬಾಗಲಕೋಟೆ | 11 | ಬಾದಾಮಿ |
| | | 12 | ಬಾಗಲಕೋಟೆ |
| | | 13 | ಭೀಳಗಿ |
| | | 14 | ಹುನಗುಂದ |
| | | 15 | ಜಮಖಂಡಿ |
| | | 16 | ಮುಧೋಳ |
| 3 | ರಾಯಚೂರು | 17 | ದೇವದುರ್ಗ |
| | | 18 | ಲಿಂಗಸೂರು |
| | | 19 | ರಾಯಚೂರು |
| 4 | ಕಲಬುರಗಿ | 20 | ಜೇವರ್ಗಿ |
| | | 21 | ಅಫಜಲ್‌ಪುರ |
| 5 | ಯಾದಗಿರಿ | 22 | ಶಾಹಪುರ |
| | | 23 | ಶೋರಪುರ |
| | | 24 | ಯಾದಗಿರಿ |
| 6 | ವಿಜಯಪುರ | 25 | ಬಸವನಬಾಗೇವಾಡಿ |
| | | 26 | ಮುದ್ದೇಬಿಹಾಳ |
| | | 27 | ಇಂಡಿ |
| | | 28 | ಸಿಂದಗಿ |
| 7 | ಗದಗ | 29 | ನರಗುಂದ |
| | | 30 | ರೋಣ |
| | | 31 | ಶಿರಹಟ್ಟಿ |
| 8 | ಹಾವೇರಿ | 32 | ಹಾನಗಲ್ |
| | | 33 | ಹಾವೇರಿ |
| | | 34 | ಸವಣೂರು |
| | | 35 | ಶಿಗ್ಗಾಂವಿ |
| | | 36 | ಬ್ಯಾಡಗಿ |
| | | 37 | ಹೀರೇಕೆರೂರು |
| 9 | ಧಾರವಾಡ | 38 | ಧಾರವಾಡ |
| | | 39 | ಹುಬ್ಬಳ್ಳಿ |
| | | 40 | ಕಲಘಟಗಿ |
| | | 41 | ಕುಂದಗೋಳ |
| | | 42 | ನವಲಗುಂದ |

| | | | |
|---|---|---|---|
| 10 | ಶಿವಮೊಗ್ಗ | 43 | ಹೊಸನಗರ |
| | | 44 | ಸಾಗರ |
| | | 45 | ಶಿಕಾರಿಪುರ |
| | | 46 | ಶಿವಮೊಗ್ಗ |
| | | 47 | ಸೊರಬ |
| | | 48 | ತೀರ್ಥಹಳ್ಳಿ |
| 11 | ಹಾಸನ | 49 | ಸಕಲೇಶಪುರ |
| | | 50 | ಬೇಲೂರು |
| | | 51 | ಆಲೂರು |
| 12 | ಚಿಕ್ಕಮಗಳೂರು | 52 | ಕೊಪ್ಪ |
| | | 53 | ಮೂಡಿಗೆರೆ |
| | | 54 | ನರಸಿಂಹರಾಜಪುರ |
| | | 55 | ಶೃಂಗೇರಿ |
| 13 | ಕೊಡಗು | 56 | ಮಡಿಕೇರಿ |
| | | 57 | ಸೋಮವಾರಪೇಟೆ |
| | | 58 | ವಿರಾಜಪೇಟೆ |
| 14 | ದಕ್ಷಿಣ ಕನ್ನಡ | 59 | ಬೆಳ್ತಂಗಡಿ |
| | | 60 | ಬಂಟ್ವಾಳ |
| | | 61 | ಮಂಗಳೂರು |
| | | 62 | ಪುತ್ತೂರು |
| | | 63 | ಸುಳ್ಯ |
| 15 | ಉಡುಪಿ | 64 | ಕಾರ್ಕಳ |
| | | 65 | ಕುಂದಾಪುರ |
| | | 66 | ಉಡುಪಿ |
| 16 | ಉತ್ತರ ಕನ್ನಡ | 67 | ಅಂಕೋಲಾ |
| | | 68 | ಭಟ್ಕಳ |
| | | 69 | ಹಳಿಯಾಳ |
| | | 70 | ಹೊನ್ನಾವರ |
| | | 71 | ಕಾರವಾರ |
| | | 72 | ಕುಮಟಾ |
| | | 73 | ಮುಂಡಗೋಡ |
| | | 74 | ಸಿದ್ದಾಪುರ |
| | | 75 | ಶಿರಸಿ |
| | | 76 | ಸೂಪ |
| | | 77 | ಯಲ್ಲಾಪುರ |
| 17 | ಮೈಸೂರು | 78 | ಹೆಗ್ಗಡದೇವನಕೋಟೆ |
| | | 79 | ನಂಜನಗೂಡು |
| | | 80 | ಟಿ.ನರಸೀಪುರ |

(ಲಲಿತಾ.ಹೆಚ್.ಹಂದಿಗೋಳ)
ಸರ್ಕಾರದ ಉಪ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ನೋ&ಮು)

10/8/2019

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ 2019ನೇ ಸಾಲಿನಲ್ಲಿ ಅತಿವೃಷ್ಟಿ/ಪ್ರವಾಹ ಎದುರಿಸಿರುವ ಜಿಲ್ಲೆ/ತಾಲ್ಲೂಕುಗಳನ್ನು ಪ್ರವಾಹ ಪೀಡಿತ ಪ್ರದೇಶಗಳೆಂದು ಘೋಷಿಸುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಕಂಇ 87 ಟಿಎನ್‌ಆರ್ 2019, ದಿನಾಂಕ:10.08.2019.

ಪ್ರಸ್ತಾವನೆ:

*****

ಮೇಲೆ ಓದಲಾದ ಸರ್ಕಾರದ ಆದೇಶ ದಿನಾಂಕ:10.08.2019ರಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ 09.08.2019 ರಂದು ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಶಿಫಾರಸ್ಸು ಮಾಡಿದಂತೆ ಭಾರಿ ಮಳೆ ಮತ್ತು ಪ್ರವಾಹಕ್ಕೆ ಒಳಗಾದ ಪ್ರದೇಶಗಳನ್ನು ಗುರುತಿಸಿ, ರಾಜ್ಯದ 17 ಜಿಲ್ಲೆಗಳಲ್ಲಿ ಬರುವ 80 ತಾಲ್ಲೂಕುಗಳನ್ನು ಪ್ರವಾಹ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. ಪ್ರಸ್ತುತ ಇನ್ನೂ ಹೆಚ್ಚುವರಿಯಾಗಿ ನೆರೆ ಬಾಧಿತವಾದ 12 ಜಿಲ್ಲೆಗಳಲ್ಲಿ ಬರುವ 23 ತಾಲ್ಲೂಕುಗಳನ್ನು ಪ್ರವಾಹ ಪೀಡಿತ ತಾಲ್ಲೂಕುಗಳೆಂದು ಸೇರ್ಪಡೆ ಮಾಡಿ ಘೋಷಿಸಲು ತೀರ್ಮಾನಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 87 ಟಿಎನ್‌ಆರ್ 2019 ಬೆಂಗಳೂರು, ದಿನಾಂಕ:16-08-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019ನೇ ಸಾಲಿನ ಮುಂಗಾರು ಋತುವಿನಲ್ಲಿ ಆಗಸ್ಟ್ 1 ರಿಂದ ಇಲ್ಲಿಯವರೆಗೆ ಅತಿವೃಷ್ಟಿಯಿಂದ ಉಂಟಾದ ಪ್ರವಾಹದಿಂದಾಗಿ ಅಪಾರ ಪ್ರಮಾಣದಲ್ಲಿ ಬೆಳೆ ಹಾನಿ, ಜೀವ ಹಾನಿ ಹಾಗೂ ಮೂಲಭೂತ ಸೌಕರ್ಯಗಳ ಹಾನಿಯಾಗಿರುವ ಹಿನ್ನೆಲೆಯಲ್ಲಿ ಹೆಚ್ಚುವರಿಯಾಗಿ ಅನುಬಂಧದಲ್ಲಿ ನಮೂದಿಸಿರುವ ರಾಜ್ಯದ 12 ಜಿಲ್ಲೆಗಳ 23 ತಾಲ್ಲೂಕುಗಳನ್ನು ಸೇರ್ಪಡೆಗೊಳಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದ ವರೆಗೆ ಪ್ರವಾಹ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ.

ಪ್ರವಾಹ ಪೀಡಿತ ಪ್ರದೇಶಗಳೆಂದು ಘೋಷಿಸಿರುವ ತಾಲ್ಲೂಕುಗಳಲ್ಲಿ ಎಸ್.ಡಿ.ಆರ್.ಎಫ್/ಎನ್.ಡಿ.ಆರ್.ಎಫ್ ಮಾರ್ಗಸೂಚಿ ಪ್ರಕಾರ ಪರಿಹಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಜಿಲ್ಲಾಡಳಿತವು ಕ್ರಮ ಕೈಗೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಸಂತ ಕುಮಾರ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3)

16/8/2019

ಇವರಿಗೆ:

ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯಪತ್ರ, ವಿಕಾಸಸೌಧ, ಬೆಂಗಳೂರು - ಈ ಆದೇಶವನ್ನು ಕೂಡಲೇ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿ:

1) ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
3) ಪ್ರಾದೇಶಿಕ ಆಯುಕ್ತರು, ಬೆಂಗಳೂರು / ಮೈಸೂರು ಮತ್ತು ಕಲಬುರಗಿ ವಿಭಾಗ,
4) ಸಂಬಂಧಪಟ್ಟ 12 ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5) ಸಂಬಂಧಪಟ್ಟ 12 ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6) ರಾಜ್ಯದ 12 ಜಿಲ್ಲೆಗಳ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು.
7) ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
8) ಆಯುಕ್ತರು, ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು.
9) ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್, ಬೆಂಗಳೂರು.
10) ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ಉಸ್ತುವಾರಿ ಕೇಂದ್ರ, ಅಟ್ಟೂರು ಬಡಾವಣೆ, ಯಲಹಂಕ, ಬೆಂಗಳೂರು.
11) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
12) ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
13) ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
14) ಸಂಬಂಧಪಟ್ಟ 12 ಜಿಲ್ಲೆಗಳ ಜಿಲ್ಲಾ ಖಜಾನಾಧಿಕಾರಿಗಳು.
15) ಸಂಬಂಧಪಟ್ಟ 12 ಜಿಲ್ಲೆಗಳ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತ ಕಾರ್ಯದರ್ಶಿಗಳು.
16) ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
17) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
18) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
19) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರುರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
20) ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರ ಆಪ್ತ ಕಾರ್ಯದರ್ಶಿ.
21) ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
22) ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಲೆಕ್ಕಪತ್ರ ಶಾಖೆ.
23) ಶಾಖಾ ರಕ್ಷಾ ಕಡತ.

## ಅನುಬಂಧ

**ದಿನಾಂಕ: 01.08.2019ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿನ 12 ಜಿಲ್ಲೆಗಳ 23 ತಾಲ್ಲೂಕುಗಳು ಪ್ರವಾಹಕ್ಕೆ ತುತ್ತಾಗಿರುವ ಪ್ರದೇಶಗಳ ಹೆಚ್ಚುವರಿ ಪಟ್ಟಿ**

| ಕ್ರ. ಸಂ. | ಜಿಲ್ಲೆ | ಕ್ರ. ಸಂ. | ತಾಲ್ಲೂಕು |
|---|---|---|---|
| 1 | ದಾವಣಗೆರೆ | 1 | ಹರಿಹರ |
| | | 2 | ಹೊನ್ನಾಳಿ |
| 2 | ಚಾಮರಾಜನಗರ | 3 | ಕೊಳ್ಳೆಗಾಲ |
| 3 | ಮೈಸೂರು | 4 | ಹುಣಸೂರು |
| | | 5 | ಪಿರಿಯಾಪಟ್ಟಣ |
| 4 | ಮಂಡ್ಯ | 6 | ಕೃಷ್ಣರಾಜಪೇಟೆ |
| | | 7 | ಮಳವಳ್ಳಿ |
| | | 8 | ಪಾಂಡವಪುರ |
| | | 9 | ಶ್ರೀರಂಗಪಟ್ಟಣ |
| 5 | ಬಳ್ಳಾರಿ | 10 | ಹಡಗಲಿ |
| | | 11 | ಹರಪ್ಪನಹಳ್ಳಿ |
| 6 | ಕೊಪ್ಪಳ | 12 | ಗಂಗಾವತಿ |
| | | 13 | ಕೊಪ್ಪಳ |
| 7 | ರಾಯಚೂರು | 14 | ಮಾನ್ವಿ |
| | | 15 | ಸಿಂಧನೂರು |
| 8 | ಕಲಬುರಗಿ | 16 | ಚಿತ್ತಾಪುರ |
| | | 17 | ಕಲಬುರಗಿ |
| 9 | ಹಾವೇರಿ | 18 | ರಾಣೆಬೆನ್ನೂರು |
| 10 | ಹಾಸನ | 19 | ಅರಕಲಗೂಡು |
| | | 20 | ಹಾಸನ |
| | | 21 | ಹೊಳೆನರಸಿಪುರ |
| 11 | ಶಿವಮೊಗ್ಗ | 22 | ಭದ್ರಾವತಿ |
| 12 | ಚಿಕ್ಕಮಗಳೂರು | 23 | ಚಿಕ್ಕಮಗಳೂರು |

(ವಸಂತ ಕುಮಾರ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3)

16/8/2019